# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 203 |
| ಸದಸ್ಯರ ಹೆಸರು | : | ಶ್ರೀ ಐವನ್ ಡಿ'ಸೋಜಾ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 12-08-2025 |
| ಉತ್ತರಿಸುವ ಸಚಿವರು | : | ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಮಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಸ್ಮಾರ್ಟ್ ಸಿಟಿ ಯೋಜನೆ ಅನ್ವಯ ಕೈಗೊಂಡ ಕಾಮಗಾರಿಗಳಲ್ಲಿ ಪೂರ್ಣಗೊಂಡ ಕಾಮಗಾರಿಗಳು ಯಾವುವು; ಇದಕ್ಕೆ ತಗುಲಿದ ವೆಚ್ಚ ಎಷ್ಟು: | ಸ್ಮಾರ್ಟ್ ಸಿಟಿ ಯೋಜನೆಯಡಿ ಮಂಗಳೂರು ನಗರದಲ್ಲಿ ರೂ.967.43 ಕೋಟಿ ಮೊತ್ತದ 56 ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಇವುಗಳ ಪೈಕಿ 50 ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದ್ದು, ಪೂರ್ಣಗೊಂಡ ಕಾಮಗಾರಿಗಳಿಗೆ ರೂ.723.33 ಕೋಟಿ ವೆಚ್ಚ ಮಾಡಲಾಗಿರುತ್ತದೆ. |
| ಆ) | ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ಕೈಗೊಂಡ ಎಷ್ಟು ಕಾಮಗಾರಿಗಳು ಪ್ರಗತಿಯಲ್ಲಿದೆ ಹಾಗೂ ಪ್ರಾರಂಭಿಸದೇ ಇರುವ ಕಾಮಗಾರಿಗಳು ಯಾವುವು; (ವಿವರ ನೀಡುವುದು) | ಸ್ಮಾರ್ಟ್ ಸಿಟಿ ಯೋಜನೆಯಡಿ ಮಂಗಳೂರು ನಗರದಲ್ಲಿ ರೂ.967.43 ಕೋಟಿ ಮೊತ್ತದ 56 ಕಾಮಗಾರಿಗಳ ಪೈಕಿ 5 ಕಾಮಗಾರಿಗಳು ಪ್ರಗತಿಯಲ್ಲಿವೆ. ಮುಂದುವರೆದು, ರೂ.1.50 ಕೋಟಿ ಮೊತ್ತದ ಕುಸ್ತಿ ಒಳಾಂಗಣ ಕ್ರೀಡಾಂಗಣ ಕಾಮಗಾರಿಗೆ ಟೆಂಡರ್ ಪ್ರಕ್ರಿಯೆ ನಡೆಸಿ, ದಿನಾಂಕ:18.06.2025 ರಂದು ಸಮ್ಮತಿ ಪತ್ರ(Letter of Acceptance)ನೀಡಲಾಗಿದ್ದು, ಕಾಮಗಾರಿಯನ್ನು ಶೀಘ್ರವಾಗಿ ಪ್ರಾರಂಭಿಸಲಾಗುವುದು |
| ಇ) | ನಗರಪಾಲಿಕೆ ವ್ಯಾಪ್ತಿಯಲ್ಲಿ ಫುಟ್‌ಬಾಲ್ ಮೈದಾನ ಟರ್ಫ್ ಕಾಮಗಾರಿ ಪೂರ್ಣಗೊಳ್ಳುವುದು ಯಾವಾಗ: ಇದಕ್ಕೆ ತಗಲುವ ವೆಚ್ಚ ಎಷ್ಟು; (ವಿವರ ನೀಡುವುದು) | ಮಂಗಳೂರು ನಗರದಲ್ಲಿ ಸ್ಮಾರ್ಟ್ ಸಿಟಿ ಯೋಜನೆಯಡಿ ನೆಹರು ಮೈದಾನದ ಸಂಕೀರ್ಣದಲ್ಲಿ ಫುಟ್‌ಬಾಲ್ ಮೈದಾನಕ್ಕೆ ಟರ್ಫ್ ಅಳವಡಿಸುವ ಕಾಮಗಾರಿಯನ್ನು ರೂ.2.50 ಕೋಟಿ ಮೊತ್ತದಲ್ಲಿ ಕೈಗೆತ್ತಿಕೊಳ್ಳಲಾಗಿದೆ. ಈ ಕಾಮಗಾರಿಗೆ ದಿನಾಂಕ:21.01.2025 ರಂದು ಕಾರ್ಯಾದೇಶ ನೀಡಲಾಗಿದೆ. ಪ್ರಸ್ತುತ ಶೇಕಡ 95 ರಷ್ಟು ಭೌತಿಕ ಪ್ರಗತಿ ಸಾಧಿಸಲಾಗಿದ್ದು, ಫುಟ್‌ಬಾಲ್ ಮೈದಾನಕ್ಕೆ ಟರ್ಫ್ ಅಳವಡಿಸುವ ಕಾಮಗಾರಿಯು ಪ್ರಗತಿಯಲ್ಲಿದ್ದು, ಫಿಫಾ ಮಾನದಂಡಗಳಿಗೆ ಅನುಗುಣವಾಗಿ ಟರ್ಫ್ ಪ್ರದೇಶದಲ್ಲಿ ರಬ್ಬರ್ ಗ್ರ್ಯಾನ್ಯೂಲ್ಸ್ ಮತ್ತು , ಸಿಲಿಕಾ ಅಳವಡಿಸುವಿಕೆ ಕೆಲಸವು ಪ್ರಗತಿಯಲ್ಲಿರುತ್ತದೆ. ನೆಹರು ಮೈದಾನದ ಸಂಕೀರ್ಣದಲ್ಲಿ ಫುಟ್‌ಬಾಲ್ ಮೈದಾನಕ್ಕೆ ಟರ್ಫ್ ಅಳವಡಿಸುವ ಕಾಮಗಾರಿಯನ್ನು ಅಗಸ್ಟ್-2025ರ ಅಂತ್ಯದೊಳಗೆ ಪೂರ್ಣಗೊಳಿಸಲಾಗುವುದು. |

| | | |
|---|---|---|
| ಈ) | ನಗರಪಾಲಿಕೆ ವ್ಯಾಪ್ತಿಯಲ್ಲಿ ಸ್ಮಾರ್ಟ್ ಸಿಟಿ ಅನ್ವಯ ಕದ್ರಿ ಪಾರ್ಕ್ ಮತ್ತು ಸುತ್ತಮುತ್ತಲಿನ ನವೀಕರಣಕ್ಕಾಗಿ ಮಾಡಿದ ಖರ್ಚು ಎಷ್ಟು? (ವಿವರ ನೀಡುವುದು) | ಸ್ಮಾರ್ಟ್ ಸಿಟಿ ಯೋಜನೆಯಡಿ ಕದ್ರಿ ಪಾರ್ಕ್ ಮತ್ತು ಸುತ್ತಮುತ್ತಲಿನ ನವೀಕರಣ ಕಾಮಗಾರಿಗೆ ರೂ.17.33 ಕೋಟಿಗಳನ್ನು ವೆಚ್ಚ ಮಾಡಲಾಗಿದೆ. |

ಸಂಖ್ಯೆ: ನಅಇ 187 ಸಿಎಸ್‌ಎಸ್ 2025

**(ಬಿ.ಎಸ್.ಸುರೇಶ)**

ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು